ನಿಮ್ಮೊಡನೆ

# ಭರವಸೆಯ ಆಶಾಕಿರಣ

ಸಾರ್ವಜನಿಕ ರಂಗದಲ್ಲಿ ಬೇರುಬಿಟ್ಟಿರುವ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಲು ಸಂವಿಧಾನ ಬದ್ಧವಾದ ಒಂದು ವ್ಯವಸ್ಥೆ ಇರಬೇಕು ಎಂಬ ಒತ್ತಾಯಕ್ಕೆ ದೇಶದ ಜನರು ದೊಡ್ಡ ಪ್ರಮಾಣದಲ್ಲಿ ಸ್ಪಂದಿಸಿದ್ದಾರೆ. ಭ್ರಷ್ಟಾಚಾರವನ್ನು ನಿಯಂತ್ರಿಸಲು ಸಾಧ್ಯವೇ ಇಲ್ಲ ಎಂಬ ಈಗಿನ ಹತಾಶ ಪರಿಸ್ಥಿತಿಯಲ್ಲಿ ಈ ಬೆಳವಣಿಗೆ ಒಂದು ಆಶಾಕಿರಣ. ಪ್ರಬಲವಾದ ಜನ ಲೋಕಪಾಲ ವ್ಯವಸ್ಥೆಗೆ ಒತ್ತಾಯಿಸಿ ಕೆಲವು ತಿಂಗಳ ಹಿಂದೆ ಸಾಮಾಜಿಕ ಕಾರ್ಯಕರ್ತ ಅಣ್ಣಾ ಹಜಾರೆ ಅವರ ನೇತೃತ್ವದಲ್ಲಿ ಹೋರಾಟ ಆರಂಭವಾದಾಗ ದೇಶದ ಜನರಿಂದ ಭಾರೀ ಬೆಂಬಲ ವ್ಯಕ್ತವಾಗಿತ್ತು. ಸಂಸತ್ತಿನಲ್ಲಿ ಸರ್ಕಾರ ಮಂಡಿಸಿರುವ ಲೋಕಪಾಲ ವ್ಯವಸ್ಥೆಯ ಕರಡು ಮಸೂದೆಯನ್ನು ಹಿಂದಕ್ಕೆ ಪಡೆಯುವಂತೆ ಒತ್ತಾಯಿಸಿ ದೆಹಲಿಯಲ್ಲಿ ಮತ್ತೆ ಉಪವಾಸ ಮುಷ್ಕರ ನಡೆಸುವ ಅಣ್ಣಾ ಹಜಾರೆ ನೇತೃತ್ವದ ನಾಗರಿಕ ಸಮಿತಿ ಪ್ರಯತ್ನವನ್ನು ದೆಹಲಿ ಪೊಲೀಸರ ಮೂಲಕ ಹತ್ತಿಕ್ಕಿದ ಕ್ರಮ ದೇಶದ ಜನರನ್ನು ರೊಚ್ಚಿಗೆಬ್ಬಿಸಿದೆ. ಹಜಾರೆ ಅವರ ಬಂಧನವನ್ನು ಖಂಡಿಸಿ ದೇಶದ ಉದ್ದಗಲದಲ್ಲಿ ಜನರು ಬೀದಿಗಿಳಿದು ಪ್ರತಿಭಟಿಸಿದ್ದಾರೆ. ಪ್ರಬಲ ಲೋಕಪಾಲ ವ್ಯವಸ್ಥೆಗಾಗಿ ಆಂದೋಲನ ಆರಂಭವಾಗಿದೆ. ಜನರ ಒತ್ತಾಯಕ್ಕೆ ಸರ್ಕಾರ ಮಣಿದಿದೆ. ಈ ಬೆಳವಣಿಗೆ ದೇಶದ ಜನರಲ್ಲಿ ಭರವಸೆಯ ಹೊಸ ಬೆಳಕನ್ನು ಮೂಡಿಸಿದೆ.

ಇತ್ತೀಚಿನ ವರ್ಷಗಳಲ್ಲಿ ಕೇಂದ್ರ ಹಾಗೂ ವಿವಿಧ ರಾಜ್ಯಗಳಲ್ಲಿ ಹತ್ತಾರು ಭ್ರಷ್ಟಾಚಾರದ ಹಗರಣಗಳು ಬೆಳಕಿಗೆ ಬಂದಿವೆ. ಎಲ್ಲ ರಂಗಗಳಲ್ಲೂ ಭ್ರಷ್ಟಾಚಾರ ಮಿತಿ ಮೀರಿದೆ. ಕೇಂದ್ರ ಹಾಗೂ ರಾಜ್ಯಗಳಲ್ಲಿ ಅಧಿಕಾರಕ್ಕೆ ಬಂದ ಬಹುತೇಕ ರಾಜಕೀಯ ನಾಯಕರಿಗೆ ಭ್ರಷ್ಟಾಚಾರದ ಕಳಂಕ ಅಂಟಿಕೊಂಡಿದೆ. ದೇಶದ ಹಣ ಹೊರ ದೇಶಗಳ ಬ್ಯಾಂಕುಗಳಲ್ಲಿ ಕಪ್ಪು ಹಣವಾಗಿ ಕೊಳೆಯುತ್ತಿದೆ. ರಾಜಕಾರಣಿಗಳಷ್ಟೇ ಅಲ್ಲ, ಸರ್ಕಾರಿ ಅಧಿಕಾರಿಗಳು, ಮಧ್ಯವರ್ತಿಗಳು, ನಾನಾ ನಮೂನೆಯ ವಂಚಕರು ಒಂದಾಗಿ ಎಲ್ಲ ವ್ಯವಸ್ಥೆಯನ್ನೂ ಭ್ರಷ್ಟಗೊಳಿಸುತ್ತಿದ್ದಾರೆ. ಚುನಾವಣೆಗಳಲ್ಲಿ ಹಣದ ಪ್ರಭಾವ ಹೆಚ್ಚಾಗಿದೆ. ಹಣ ಇದ್ದವರು ಮಾತ್ರ ಸ್ಪರ್ಧಿಸಲು ಸಾಧ್ಯ ಎನ್ನುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಅಮಾಯಕ ಮತದಾರರು ಭ್ರಷ್ಟರಾಗಿದ್ದಾರೆ. ಈ ಎಲ್ಲ ಬೆಳವಣಿಗೆಗಳು ಪ್ರಜಾತಂತ್ರ ವ್ಯವಸ್ಥೆಯನ್ನೇ ಅಣಕಿಸುತ್ತವೆ. ದೇಶದ ಎಲ್ಲ ಅವ್ಯವಸ್ಥೆಗಳಿಗೂ ಭ್ರಷ್ಟಾಚಾರವೇ ಕಾರಣ ಎಂಬ ಭಾವನೆ ಜನರಲ್ಲಿ ಬೇರೂರಿದೆ. ಅದು ನಿಜವೂ ಹೌದು. ಭ್ರಷ್ಟಾಚಾರಕ್ಕೆ ಕಡಿವಾಣ ಹಾಕದಿದ್ದರೆ ದೇಶಕ್ಕೆ ಭವಿಷ್ಯವೇ ಇಲ್ಲ. ಈ ಪರಿಸ್ಥಿತಿಯಲ್ಲಿ ಭ್ರಷ್ಟಾಚಾರ ನಿಯಂತ್ರಿಸಲು ಪ್ರಬಲವಾದ ಒಂದು ವ್ಯವಸ್ಥೆ ಬೇಕು ಎಂದು ಜನರು ಒತ್ತಾಯಿಸುವುದರಲ್ಲಿ ಅರ್ಥವಿದೆ.

ಲೋಕಪಾಲ ಮಸೂದೆ ವ್ಯಾಪ್ತಿಗೆ ದೇಶದ ಪ್ರಧಾನಮಂತ್ರಿ ಹಾಗೂ ಸುಪ್ರೀಂ ಕೋರ್ಟಿನ ಮುಖ್ಯ ನ್ಯಾಯಮೂರ್ತಿಗಳನ್ನು ಸೇರಿಸಬೇಕೇ, ಬೇಡವೇ ಎಂಬುದು ವಿವಾದ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರಧಾನಮಂತ್ರಿ ಹುದ್ದೆ ಅತ್ಯುನ್ನತ ಅಧಿಕಾರ ಸ್ಥಾನ. ಅವರನ್ನು ಲೋಕಪಾಲ ಮಸೂದೆ ವ್ಯಾಪ್ತಿಯ ಹೊರಗಿಡಬೇಕು ಎಂಬ ವಾದದಲ್ಲಿ ಹುರುಳಿದೆ. ಪ್ರಧಾನಿ ಅವರೂ ಲೋಕಪಾಲ ವ್ಯವಸ್ಥೆ ವಾಪ್ತಿಯಲ್ಲಿರಬೇಕು ಎಂಬ ಒತ್ತಾಯವೂ ಇದೆ. ಅದೇನೇ ಇರಲಿ, ಭ್ರಷ್ಟಾಚಾರವನ್ನು ನಿಯಂತ್ರಿಸಲು ಒಂದು ಪರಿಣಾಮಕಾರಿ ವ್ಯವಸ್ಥೆಯನ್ನು ಅತ್ಯಂತ ತುರ್ತಾಗಿ ರೂಪಿಸುವ ಅಗತ್ಯವಿದೆ. ಸರ್ಕಾರ, ನಾಗರಿಕ ಸಮಿತಿ ಸದಸ್ಯರ ಜತೆಯಲ್ಲಿ ಸಮಾಲೋಚನೆ ನಡೆಸುವ ಮೂಲಕವೇ ಸರ್ವಸಮ್ಮತ ಲೋಕಪಾಲ ಮಸೂದೆ ರೂಪಿಸಬೇಕು. ಭ್ರಷ್ಟಾಚಾರಿಗಳಿಗೆ ಒಂದು ಕಾಲಮಿತಿಯಲ್ಲಿ ಶಿಕ್ಷೆ ಆಗುವಂತಿರಬೇಕು. ನಮ್ಮ ಸದ್ಯದ ನ್ಯಾಯಾಂಗ ವ್ಯವಸ್ಥೆಯಲ್ಲಿ ತ್ವರಿತವಾಗಿ ವಿಚಾರಣೆ ನಡೆಸಿ ಶಿಕ್ಷಿಸಲು ಸಾಧ್ಯವಿಲ್ಲ. ವರ್ಷಗಟ್ಟಲೆ ವಿಚಾರಣೆ ನಡೆಯುತ್ತದೆ. ಇಂತಹ ವಿಳಂಬ ವ್ಯವಸ್ಥೆಯಿಂದಾಗಿ ಭ್ರಷ್ಟಾಚಾರಿಗಳು ಶಿಕ್ಷೆ ತಪ್ಪಿಸಿಕೊಳ್ಳುವ ಸಾಧ್ಯತೆ ಇದೆ. ಅದಕ್ಕೆ ಅವಕಾಶ ಇರಬಾರದು. ಲೋಕಪಾಲ ವ್ಯವಸ್ಥೆ ಅತ್ಯಂತ ಚುರುಕಾಗಿ ಕಾರ್ಯ ನಿರ್ವಹಿಸಬೇಕು. ಅದರ ಕಾರ್ಯದಲ್ಲಿ ರಾಜಕೀಯ ಹಸ್ತಕ್ಷೇಪಕ್ಕೆ ಅವಕಾಶ ಇರಬಾರದು. ಭ್ರಷ್ಟಾಚಾರಿಗಳಿಗೆ ಶಿಕ್ಷೆ ತಪ್ಪಿದ್ದಲ್ಲ ಎಂಬ ವಾತಾವರಣ ನಿರ್ಮಾಣವಾದರೆ ಭ್ರಷ್ಟಾಚಾರ ತಂತಾನೇ ನಿಯಂತ್ರಣಕ್ಕೆ ಬಂದೀತು.

ನಮ್ಮ ದೇಶದಲ್ಲಿ ಶಾಸನಗಳನ್ನು ರಚಿಸುವ ಪರಮಾಧಿಕಾರ ಸಂಸತ್ತಿಗೆ ಇದೆ. ಅದನ್ನು ಯಾರೂ ಪ್ರಶ್ನಿಸುತ್ತಿಲ್ಲ. ಸಂಸತ್ತಿನ ಸದಸ್ಯರನ್ನು ಚುನಾಯಿಸುವವರು ದೇಶದ ಪ್ರಜೆಗಳು ಎಂಬುದನ್ನು ರಾಜಕೀಯ ನಾಯಕರು ಮರೆಯಬಾರದು. ಸಂಸತ್ತು ಮತ್ತು ಸರ್ಕಾರ ಜನರ ನಿರೀಕ್ಷೆಗಳಿಗೆ ತಕ್ಕಂತೆ ಕಾರ್ಯ ನಿರ್ವಹಿಸುವುದೇ ಪ್ರಜಾಪ್ರಭುತ್ವ ವ್ಯವಸ್ಥೆಯ ಆಶಯ. ಅದೇ ನಿಜವಾದ ಪ್ರಜಾತಂತ್ರ.

■ ಪ್ರೇಮಕುಮಾರ್ ಹರಿಯಬ್ಬೆ

ಎಲ್ಲ ರಂಗಗಳಲ್ಲೂ ಭ್ರಷ್ಟಾಚಾರ ಮಿತಿ ಮೀರಿದೆ. ಕೇಂದ್ರ ಹಾಗೂ ರಾಜ್ಯಗಳಲ್ಲಿ ಅಧಿಕಾರಕ್ಕೆ ಬಂದ ಬಹುತೇಕ ರಾಜಕೀಯ ನಾಯಕರಿಗೆ ಭ್ರಷ್ಟಾಚಾರದ ಕಳಂಕ ಅಂಟಿಕೊಂಡಿದೆ. ದೇಶದ ಹಣ ಹೊರ ದೇಶಗಳ ಬ್ಯಾಂಕುಗಳಲ್ಲಿ ಕಪ್ಪು ಹಣವಾಗಿ ಕೊಳೆಯುತ್ತಿದೆ. ರಾಜಕಾರಣಿಗಳಷ್ಟೇ ಅಲ್ಲ, ಸರ್ಕಾರಿ ಅಧಿಕಾರಿಗಳು, ಮಧ್ಯವರ್ತಿಗಳು, ನಾನಾ ನಮೂನೆಯ ವಂಚಕರು ಒಂದಾಗಿ ಎಲ್ಲ ವ್ಯವಸ್ಥೆಯನ್ನೂ ಭ್ರಷ್ಟಗೊಳಿಸುತ್ತಿದ್ದಾರೆ.

